ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು-572103

ಸಂಖ್ಯೆ: ತುವಿ:ವಿ.ವಿ.ಪ/ಸಿಂ.ವಿ:2024-25/2191

ದಿನಾಂಕ: 25.09.2024

**ಸುತ್ತೋಲೆ**

ವಿಷಯ: **ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳ ಕರಡು ಜ್ಯೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಿದ್ದು, ಆಕ್ಷೇಪಣೆ ಆಹ್ವಾನಿಸಿರುತ್ತಿರುವ ಕುರಿತು.**

ಉಲ್ಲೇಖ:
1) ಈ ಕಛೇರಿ ಸುತ್ತೋಲೆ ಪತ್ರ ಸಂಖ್ಯೆ: ತುವಿ:ವಿ.ವಿ.ಪ/ಸಿಂ.ವಿ: 2024-25/1601 ದಿನಾಂಕ: 19.07.2024
2) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 24.09.2024

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ ಪ್ರಕರಣ 28 (01) (ಎಫ್) ರಲ್ಲಿ ಸಂಯೋಜಿತ ಕಾಲೇಜುಗಳ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ನಾಲ್ಕು ಪ್ರಾಂಶುಪಾಲರನ್ನು ಸಿಂಡಿಕೇಟ್ ಪ್ರಾಧಿಕಾರಕ್ಕೆ ಮತ್ತು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ ಪ್ರಕರಣ 30 (01) (vi) ರಲ್ಲಿ ಹತ್ತು ಪ್ರಾಂಶುಪಾಲರುಗಳನ್ನು ವಿದ್ಯಾವಿಷಯಕ ಪರಿಷತ್‌ಗೆ ನಾಮನಿರ್ದೇಶನ ಮಾಡುವ ಸಂಬಂಧ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಲು ಪ್ರಾಂಶುಪಾಲರುಗಳ ಸೇವಾ ವಿವರಗಳನ್ನು ಸಲ್ಲಿಸುವಂತೆ ಉಲ್ಲೇಖ (1) ರಲ್ಲಿ ಸುತ್ತೋಲೆ ಹೊರಡಿಸಲಾಗಿತ್ತು. ಈ ಸಂಬಂಧ ಕಾಲೇಜಿನ ಪ್ರಾಂಶುಪಾಲರುಗಳು ಸಲ್ಲಿಸಿರುವ ಮಾಹಿತಿಯನ್ನು ಆಧರಿಸಿ ದಿನಾಂಕ 19.09.2024 ರಲ್ಲಿ ಇರುವಂತೆ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಿ ವಿಶ್ವವಿದ್ಯಾನಿಲಯದ http://tumkuruniversity.ac.in ಜಾಲತಾಣದಲ್ಲಿ ಪ್ರಕಟಿಸಲಾಗಿದೆ ಮತ್ತು ಈ ಸುತ್ತೋಲೆಯೊಂದಿಗೆ ಕಳುಹಿಸಲಾಗಿದೆ. ಸದರಿ ಕರಡು ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಲು ಅನುಸರಿಸಿರುವ ಮಾರ್ಗಸೂಚಿಗಳು ಈ ಕೆಳಕಂಡಂತಿವೆ.

a) The Principals who served longer length of service are treated as senior to those who served lesser number of years of service in the cadre of principals.
b) Principals should be drawing UGC or equivalent running pay scale of Rs.1,31,400-2,17,100 or Rs.1,44,200-2,18,200 (as per Seventh Pay Scale).
c) Where the relative seniority is same it will be determined on the basis of the date of birth.
d) The Principals, who have attained the age of superannuation, temporary, drawing the pay scale less than Rs.1,31,400-2,17,100 or Rs.1,44,200-2,18,200 are not eligible for inclusion of their name in the Seniority list.
e) The period of nomination as prescribed under KSU Act 2000.

ಅಂತಿಮವಾಗಿ ಜೇಷ್ಠತಾ ಪಟ್ಟಿಯನ್ನು ಆಧರಿಸಿ ಜೇಷ್ಠತೆ ಮತ್ತು ಸರದಿಯ ಆಧಾರದ ಮೇಲೆ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 28 (01) (ಎಫ್) ಮತ್ತು 30 (01) (vi) ರನ್ವಯ ಸಕ್ಷಮ ಪ್ರಾಧಿಕಾರಗಳಿಗೆ ನಾಮನಿರ್ದೇಶನ ಮಾಡಲು ಕ್ರಮ ಕೈಗೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ. ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯ ಬಗ್ಗೆ ಯಾವುದಾದರು ಬದಲಾವಣೆ / ಸೇರ್ಪಡೆ / ಆಕ್ಷೇಪಣೆಗಳಿದ್ದಲ್ಲಿ (ಮೇಲಿನ ಮಾರ್ಗಸೂಚಿಗಳನ್ವಯ) ದಿನಾಂಕ 04.10.2024ರ ಶುಕ್ರವಾರ ಅಪರಾಹ್ನ 3.00 ಗಂಟೆಯೊಳಗಾಗಿ ಲಿಖಿತ ರೂಪದಲ್ಲಿ ಉಪಕುಲಸಚಿವರು, ಸಿಂಡಿಕೇಟ್ / ವಿದ್ಯಾವಿಷಯಕ ಪರಿಷತ್ ವಿಭಾಗ ಇವರಿಗೆ ಸಲ್ಲಿಸಬಹುದಾಗಿದೆ ಮತ್ತು ಸಾಫ್ಟ್ ಪ್ರತಿಯನ್ನು ಇ-ಮೇಲ್ ಐಡಿ drsyndicatetut@gmail.com ಇಲ್ಲಿಗೆ ಕಳುಹಿಸಲು ಕೋರಿದೆ. ನಂತರ ಬಂದ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

26/9/24

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

**ಪ್ರಾಂಶುಪಾಲರುಗಳು, ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಸರ್ಕಾರಿ ಮತ್ತು ಅನುದಾನಿತ ಖಾಸಗಿ ಸಂಯೋಜಿತ ಕಾಲೇಜುಗಳು.**

**ಪ್ರತಿಗಳು:**

1) ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2) ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ಸುತ್ತೋಲೆಯನ್ನು ಎಲ್ಲಾ ಪ್ರಾಂಶುಪಾಲರುಗಳಿಗೆ ಇ-ಮೇಲ್ ಮೂಲಕ ಕಳುಹಿಸುವುದು.
3) ಕಚೇರಿ ಪ್ರತಿ.